# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 1004(1080)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಪುಟ್ಟಣ್ಣ(ಶಿಕ್ಷಕರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ವಿಷಯ : ಅನುದಾನಿತ ಶಾಲಾ ಕಾಲೇಜುಗಳಲ್ಲಿ ಖಾಲಿ ಹುದ್ದೆ ತುಂಬಲು ಅನುಮತಿ ನೀಡುವ ಬಗ್ಗೆ

(ಅ) ರಾಜ್ಯದಲ್ಲಿ ಪ್ರಸ್ತುತ ನಡೆಯುತ್ತಿರುವ ಅನುದಾನಿತ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳೆಷ್ಟು; (ವಿವರ ನೀಡುವುದು)

(ಆ) ಸದರಿ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರರ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಈ ಶಾಲಾ ಕಾಲೇಜುಗಳಲ್ಲಿ ದಿನಾಂಕ:01.01.2016 ರಿಂದ 31.12.2020ರ ಅವಧಿಯಲ್ಲಿ ನಿವೃತ್ತಿ, ಮರಣ ಇತ್ಯಾದಿ ಕಾರಣಗಳಿಂದ ಖಾಲಿ ಇರುವ ಹುದ್ದೆಗಳೆಷ್ಟು; (ವಿವರ ನೀಡುವುದು)

(ಈ) ಈ ರೀತಿಯ ಖಾಲಿ ಹುದ್ದೆಗಳಿಂದ ಶಾಲೆಗಳ ಶೈಕ್ಷಣಿಕ ಚಟುವಟಿಕೆಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದಲ್ಲಿ, ಸದರಿ ಹುದ್ದೆಗಳನ್ನು ತುಂಬಲು ಯಾವಾಗ ಅನುಮತಿ ನೀಡಲಾಗುವುದು? (ವಿವರ ನೀಡುವುದು)